# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 16.07.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ತ್ರಿವೇಣಿ ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಮಂಗಳಮ್ಮ | ಸಂಪರ್ಕ ಕಾರ್ಯಕರ್ತೆ |
| 6 | ಕಮಲಮ್ಮ ಎಸ್.ಆರ್ | ಸಂಪರ್ಕ ಕಾರ್ಯಕರ್ತೆ |

**-:ನಡಾವಳಿಯ ವರದಿ:-**

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದನೋಡಲ್ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತಕೋರಿದರು.

**ವಿಷಯ ಸಂಖ್ಯೆ: 1:-ರಸ್ತೆಗುಂಡಿಗಳ ಬಗ್ಗೆ**

ರಸ್ತೆಗಳಲ್ಲಿ ಗುಂಡಿಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಾಲಿಕೆಯ Fix My Street App ನ್ನಲ್ಲಿ ಪ್ರತಿಯೊಂದು ರಸ್ತೆಗುಂಡಿಯ ಚಿತ್ರಸಹಿತ ವಿವರಗಳನ್ನು ದಾಖಲಿಸಿದ್ದು, ಸದರಿ ಗುಂಡಿಗಳನ್ನು ಮುಚ್ಚಿಸುವ ಕಾರ್ಯ ಪ್ರಗತಿಯಲ್ಲಿದ್ದು, ಈಗಾಗಲೇ ದೊಡ್ಡಣ್ಣ ಇಂಡಸ್ಟ್ರೀಯಲ್ ಏರಿಯಾ ಮುಖ್ಯರಸ್ತೆ, ದೊಡ್ಡಣ್ಣ ಸ್ಕೂಲ್ ರಸ್ತೆ, ಜಿ.ಕೆ.ಡಬ್ಲ್ಯೂ ಮುಖ್ಯರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಮುಚ್ಚಲಾಗಿದೆ ಎಂದು ತಿಳಿಸಿದರು.

ನೋಡಲ್ ಅಧಿಕಾರಿಗಳು ಮಾತನಾಡಿ ಹೊಸದಾಗಿ ರಸ್ತೆಗುಂಡಿಗಳನ್ನು ಗುರುತಿಸಿ ಶೀಘ್ರವಾಗಿ ಮುಚ್ಚಲು ಕ್ರಮ ಕೈಗೊಳ್ಳಲು ಸೂಚಿಸಿದರು.

ವಿಷಯ ಸಂಖ್ಯೆ: 2 :- ಡಿ.ಡಬ್ಲ್ಯೂಸಿ ಸೆಂಟರ್ ಹತ್ತಿರ ಬಿದ್ದಿರುವ ತ್ಯಾಜ್ಯವನ್ನು ತೆರವುಗೊಳಿಸುವ ಬಗ್ಗೆ

ನೋಡಲ್ ಅಧಿಕಾರಿಗಳು ಮಾತನಾಡಿ, ಡಿ.ಡಬ್ಲ್ಯೂಸಿ ಸೆಂಟರ್ ಹತ್ತಿರ ಬಿದ್ದಿರುವ ಘನತ್ಯಾಜ್ಯವನ್ನು ತೆರವುಗೊಳಿಸುವಂತೆ ದೂರುಗಳು ಬಂದಿದ್ದು ಈ ಬಗ್ಗೆ ಕ್ರಮ ವಹಿಸುವಂತೆ ಸೂಚಿಸಿದರು.

ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀಮತಿ ತ್ರಿವೇಣಿರವರು ಮಾತನಾಡಿ ಡಿ.ಡಬ್ಲ್ಯೂಸಿ ಸೆಂಟರ್ ಹತ್ತಿರ ಬಿದ್ದಿರುವ ಘನತ್ಯಾಜ್ಯವನ್ನು ಈಗಾಗಲ್ಯ ತೆರವುಗೊಳಿಸುವುದಾಗೀ ಸಭೆಗೆ ತಿಳಿಸಿದರು.

ವಿಷಯ ಸಂಖ್ಯೆ: 3:-BBMP SAHAYA APP:

- ಅವೀಶ್ ಹೆಚ್ ಎಂ, ಸಹಾಯಕ ಅಭಿಯಂತರರು, ವಾರ್ಡ್ ನಂ.70 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
- ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಸಮಸ್ಯೆ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

- ವಿಷಯ ಸಂಖ್ಯೆ:4

ಹೆಚ್ಚುವರಿ ಟಾಟಾ ಏಸ್ ಆಟೋಗಳನ್ನು ನೇಮಿಸಿಕೊಳ್ಳುವ ಬಗ್ಗೆ:-

ವಾರ್ಡ್ 70ರ, ಹಿರಿಯ ಆರೋಗ್ಯ ಸಹಾಯಕರಾದ ಶ್ರೀ ಕೆ.ಶಿವಲಿಂಗಯ್ಯರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ 4 ಟಾಟಾ ಏಸ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಮನೆಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಇನ್ನೂ 2 ಟಾಟಾಏಸ್ ಆಟೋಗಳು ಹೆಚ್ಚುವರಿಯಾಗಿಅವಶ್ಯಕವಿರುವುದಾಗೀಸಭೆಗೆ ತಿಳಿಸಿದರು.

ಇದಕ್ಕೆ ನೋಡಲ್‌ಅಧಿಕಾರಿರವರು ಪ್ರತಿಕ್ರಿಯಿಸಿ ಹೆಚ್ಚುವರಿ 2 ಟಾಟಾ ಏಸ್‌ಗಳನ್ನುನಿಯೋಜಿಸಿಕೊಳ್ಳುವ ಬಗ್ಗೆ ಎಸ್.ಡಬ್ಲ್ಯೂ.ಎಂ ಸೆಲ್ ಮುಖಾಂತರ ಮೇಲಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಿದರು.

ವಿಷಯ ಸಂಖ್ಯೆ: 5:-ಬೀದಿದೀಪಗಳ ಅಸಮರ್ಪಕ ನಿರ್ವಹಣೆ

ವಾರ್ಡ್ 70ರ ವ್ಯಾಪ್ತಿಯಲ್ಲಿ ಬೀದಿದೀಪಗಳ ನಿರ್ವಹಣೆಯನ್ನು ಪಡೆದಿರುವ ಗುತ್ತಿಗೆದಾರರು ಸಾರ್ವಜನಿಕರಿಗೆ ದೂರವಾಣಿ ಮೂಲಕ ಸ್ಪಂದಿಸುತ್ತಿಲ್ಲವೆಂದು ಹಾಜರಿದ್ದ ಹಿರಿಯಆರೋಗ್ಯ ಪರಿವೀಕ್ಷಕರು ದೂರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಪ್ರತಿಕ್ರಿಯಿಸಿ, ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರಿಗೆ ಕರೆ ಮಾಡಿ ಸಾರ್ವಜನಿಕ ದೂರುಗಳಿಗೆ ಸ್ಪಂದಿಸಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸುವಂತೆ ದೂರವಾಣಿ ಮೂಲಕ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ 70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಪ್ರತಿಯನ್ನು:**

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ